# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 295 (546)

ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.12.2022.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಳೆದ 10 ವರ್ಷಗಳಿಂದ ಸಿ & ಆರ್ ಪರಿಷ್ಕರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಸಿ & ಆರ್ ಪರಿಷ್ಕರಣೆ ಮಾಡದೇ 2011ರಲ್ಲಿ ರಚನೆಯಾದ ಸಿ & ಆರ್ ಆಧಾರದ ಮೇಲೆ ನಿಗಧಿಪಡಿಸಿದ ಹುದ್ದೆಗಳಿಗೆ ಮಾತ್ರ ಮುಂಬಡ್ತಿ ನೀಡಿರುವುದು ಅನ್ಯಾಯವಲ್ಲವೇ; | **ಹೌದು**<br>2011ರ ನಂತರ ಹೊಸದಾಗಿ ಸೃಜಿಸಿ ಮಂಜೂರಾಗಿರುವ ವಿವಿಧ ವೃಂದಗಳ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಅವಲೋಕಿಸಿರುವ (Observation) ಅಂಶಗಳಿಗೆ ಮಾಹಿತಿಯನ್ನು ಒದಗಿಸಲಾಗುತ್ತಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳು ಪರಿಷ್ಕರಣೆಯ ಹಂತದಲ್ಲಿರುತ್ತದೆ.<br>ಪ್ರಸ್ತುತ 2011ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನಿಯಮಾನುಸಾರ ಮುಂಬಡ್ತಿ ನೀಡಿರುವುದರಿಂದ ಅನ್ಯಾಯವಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಆ. | ಸಿ & ಆರ್ ಪರಿಷ್ಕರಣೆ ಮಾಡದೇ ಹೆಚ್ಚು ಸೇವೆ ಸಲ್ಲಿಸಿದ ಅಭ್ಯರ್ಥಿಗಳನ್ನು ಬಿಟ್ಟು ಕಡಿಮೆ ಸೇವೆ ಸಲ್ಲಿಸಿದ ಅಭ್ಯರ್ಥಿಗಳಿಗೆ ಮುಂಬಡ್ತಿ ನೀಡಲು ಅವಕಾಶವಿದೆಯೇ; ಹಾಗಾದಲ್ಲಿ ಹೆಚ್ಚು ಸೇವೆ ಸಲ್ಲಿಸಿದ ಅಭ್ಯರ್ಥಿಗಳಿಗೆ ಅನ್ಯಾಯವಾಗುವುದಿಲ್ಲವೇ; | ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಪ್ರಸ್ತುತ 2011 ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿರುತ್ತದೆ. ಅದರಂತೆ ಮೀಸಲಾತಿ ನಿಯಮಗಳನ್ವಯ (ರೋಸ್ಟರ್) ನಿಯಮಾನುಸಾರ ಮುಂಬಡ್ತಿ ನೀಡಲಾಗುತ್ತಿರುವುದರಿಂದ ಅನ್ಯಾಯವಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ | ಈಗಾಗಲೇ ಮುಂಬಡ್ತಿ ಪಡೆದುಕೊಂಡ ಅರ್ಹ ಸಿಬ್ಬಂದಿಗಳಿಗಿಂತ ಹೆಚ್ಚು ಸೇವೆ ಸಲ್ಲಿಸಿದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡದೆ ಅನ್ಯಾಯ ಎಸಗಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ಶಿಸ್ತಿನ ಕ್ರಮಗಳೇನು? | ಪ್ರಸ್ತುತ 2011ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮತ್ತು ಮೀಸಲಾತಿ ನಿಯಮಾನುಸಾರ ಮುಂಬಡ್ತಿ ನೀಡಿರುವುದರಿಂದ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: **MWD 281 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ